# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 935 |
| ಉತ್ತರಿಸಬೇಕಾದ ದಿನಾಂಕ : | 13.12.2023 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು: | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು. |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ. | ಮೈಸೂರು ನಗರ ಮತ್ತು ಚಾಮರಾಜ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಗುರುತಿಸಿರುವ ಕೊಳಗೇರಿ ಪ್ರದೇಶಗಳ ಸಂಖ್ಯೆಯೆಷ್ಟು; | ಮೈಸೂರು ನಗರದ ಕೃಷ್ಣರಾಜ ವಿಧಾನಸಭಾ ಕ್ಷೇತ್ರದಲ್ಲಿ 15 ಕೊಳಚೆ ಪ್ರದೇಶಗಳು, ಚಾಮರಾಜ ವಿಧಾನಸಭಾ ಕ್ಷೇತ್ರದಲ್ಲಿ 25 ಕೊಳಚೆ ಪ್ರದೇಶಗಳು ಹಾಗೂ ನರಸಿಂಹರಾಜ ವಿಧಾನಸಭಾ ಕ್ಷೇತ್ರದಲ್ಲಿ 22 ಘೋಷಿತ ಕೊಳಚೆ ಪ್ರದೇಶಗಳು ಒಟ್ಟಾರೆ 62 ಘೋಷಿತ ಕೊಳಚೆ ಪ್ರದೇಶಗಳಿರುತ್ತದೆ.<br><br>ಚಾಮರಾಜನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 21 ಘೋಷಿತ ಕೊಳಚೆ ಪ್ರದೇಶಗಳಿರುತ್ತದೆ.<br><br>ಸದರಿ ಪ್ರದೇಶಗಳಲ್ಲಿ ಮಂಡಳಿ ವತಿಯಿಂದ ಗುರುತಿಸಿರುವ ಕೊಳಗೇರಿ ಪ್ರದೇಶಗಳು ಯಾವುದು ಇರುವುದಿಲ್ಲ. |
| ಆ. | ಕೊಳಗೇರಿ, ಪ್ರದೇಶಗಳಲ್ಲಿ ಇರುವಂತಹವರಿಗೆ ಮೂಲಭೂತ ಸೌಕರ್ಯಗಳಾದ ರಸ್ತೆ, ಚರಂಡಿ, ವಿದ್ಯುತ್ ದೀಪ, ನಿವೇಶನ ವಸತಿ ಇತ್ಯಾದಿ ಸಮಸ್ಯೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಇ. | ಬಂದಿದ್ದಲ್ಲಿ, ಸರ್ಕಾರ ಇವರುಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕೈಗೊಂಡ ಯೋಜನೆಗಳೇನು; ಸೌಕರ್ಯಗಳನ್ನು ಒದಗಿಸಲು ಎಷ್ಟು ಅನುದಾನವನ್ನು ನಿಗದಿಪಡಿಸಲಾಗಿದೆ? | ಕೊಳಗೇರಿ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯ ಕಲ್ಪಿಸಲು ರಾಜ್ಯ ಸರ್ಕಾರವು ಆಯವ್ಯಯದಲ್ಲಿ ಕೊಳಚೆ ಸುಧಾರಣೆ ಯೋಜನೆಯಡಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಕ್ರಿಯಾ ಯೋಜನೆ ತಯಾರಿಸಿ ಮೂಲಭೂತ ಸೌಕರ್ಯ ಒದಗಿಸಲಾಗುತ್ತಿದೆ.<br><br>ಅದರಂತೆ, ಕಳೆದ 3 ವರ್ಷಗಳಲ್ಲಿ ಮೈಸೂರು ನಗರ ಮತ್ತು ಚಾಮರಾಜನಗರ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಘೋಷಿತ ಕೊಳಗೇರಿ ಪ್ರದೇಶಗಳಲ್ಲಿ ಕೊಳಚೆ ಸುಧಾರಣೆ ಯೋಜನೆಯಡಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ವಿವರ ಈ ಕೆಳಕಂಡಂತಿವೆ.<br><br>**ಮೈಸೂರು ನಗರ:**<br><br>2020-21, 2021-22 ಹಾಗೂ 2022-23ನೇ ಸಾಲಿನಲ್ಲಿ ಒಟ್ಟು 18 ಕಾಮಗಾರಿಗಳಿಗೆ ರೂ.247.50 ಲಕ್ಷಗಳ |

| | | |
|---|---|---|
| | | ಅನುದಾನ ನಿಗಧಿಪಡಿಸಲಾಗಿರುತ್ತದೆ.<br><br>**ಚಾಮರಾಜನಗರ:**<br><br>2020-21, 2021-22 ಹಾಗೂ 2022-23 ನೇ ಸಾಲಿನಲ್ಲಿ ಒಟ್ಟು 04 ಕಾಮಗಾರಿಗಳಿಗೆ ರೂ.585.00 ಲಕ್ಷಗಳ ಅನುದಾನವು ನೀಡಲಾಗಿರುತ್ತದೆ. ಕಾಮಗಾರಿಗಳ ವಿವರಗಳನ್ನು ಅನುಬಂಧದಲ್ಲಿ ನೀಡಿದೆ. |

ವಇ 165 ಎಸ್ ಬಿಎಂ 2023

**(ಬಿ.ಝುಡ್ ಜಮೀರ್ ಅಹಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು